**All India Radio: Bangalore**
**Regional Bulletin In Kannada**
**05.07.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.07.2026 / 2.30 p.m.**

**<><><><>**

ಮುಖ್ಯಾಂಶಗಳು

1. ಸಂವಿಧಾನದ ರಕ್ಷಣೆಯಿಂದ ಮಾತ್ರ ಹಿಂದುಳಿದ, ಶೋಷಿತ ವರ್ಗಕ್ಕೆ ಸಾಮಾಜಿಕ ನ್ಯಾಯ ಸಾಧ್ಯ - ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ
2. ಹಾಸನ, ತುಮಕೂರು, ಮಂಡ್ಯ ಜಿಲ್ಲೆಗಳಲ್ಲಿ ಕೃಷಿ ಇಲಾಖೆ ಕಾರ್ಯಾಚರಣೆ ; ಅನಧಿಕೃತ ಬೀಜ, ರಸಗೊಬ್ಬರ ವಶ
3. ಬುಡಕಟ್ಟು ಸೋಲಿಗರಿಗೆ ಪೌಷ್ಠಿಕ ಆಹಾರ ಕಿಟ್ ವಿತರಣೆ ಸ್ಥಗಿತ ; ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್.ಅಶೊಕ ಅಸಮಾಧಾನ
4. ದಾವಣಗೆರೆ, ಚಿಕ್ಕಮಗಳೂರು ಸೇರಿದಂತೆ ರಾಜ್ಯದಲ್ಲಿ ಮಳೆ ; ಚುರುಕಾದ ಕೃಷಿ ಚಟುವಟಿಕೆ ; ಕೆಲವೆಡೆ ಅಲ್ಪ ಹಾನಿ

<><><><>

ದೇಶದಲ್ಲಿ ಹಿಂದುಳಿದ ಹಾಗೂ ಶೋಷಿತ ವರ್ಗಕ್ಕೆ ರಾಜಕೀಯ, ಸಾಮಾಜಿಕ ಹಕ್ಕುಗಳು ಸಿಗುವಂತಾಗಲು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನವೇ ಕಾರಣವಾಗಿದೆ ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಡಳಿತ ಭವನದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಯನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಇಂದು ಉದ್ಘಾಟಿಸಿದರು. ಬಳಿಕ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ನಾಯಕ ಮಲ್ಲಿಕಾರ್ಜುನ್ ಖರ್ಗೆ, ಅಂಬೇಡ್ಕರ್ ಅವರಿಗೆ ಸಲ್ಲಬೇಕಾದ ಮನ್ನಣೆ ಸಿಗಬೇಕಾದರೆ, ಹಿಂದುಳಿದ ವರ್ಗದವರೂ ಸೇರಿದಂತೆ ಎಲ್ಲಾ ವರ್ಗದ ಜನರು ಸಂವಿಧಾನವನ್ನು ರಕ್ಷಿಸಬೇಕಿದೆ. ಸಾಮಾಜಿಕ ನ್ಯಾಯ ಎಲ್ಲರಿಗೂ ಸಿಗಬೇಕು ಎನ್ನುವ ಸಂವಿಧಾನದ ಆಶಯ ಈಡೇರಿದಾಗ ಮಾತ್ರ ಸಂವಿಧಾನಕ್ಕೆ ಅರ್ಥ ಸಿಗುತ್ತದೆ ಎಂದು

ಅಭಿಪ್ರಾಯಪಟ್ಟಿದ್ದಾರೆ. ಈ ಸಂದರ್ಭದಲ್ಲಿ ಬೌದ್ಧ ಬಿಕ್ಕುಗಳಾದ ಕೊಳ್ಳೆಗಾಲ ಬುದ್ಧವಿಹಾರ ಪೂಜ್ಯ ಮನೋರಕ್ಕಿತ ಬಂತೇಜಿ ಚೇತವನ, ಸಚಿವರಾದ ಕೆ.ಎಚ್.ಮುನಿಯಪ್ಪ, ಕೆ.ಜೆ.ಜಾರ್ಜ್, ಸಂಸದ ಡಾ.ಕೆ.ಸುಧಾಕರ್, ಶಾಸಕರಾದ ಶರತ್ ಬಚ್ಚೇಗೌಡ, ಆನೇಕಲ್ ಶಿವಣ್ಣ, ನೆಲಮಂಗಲ ಶ್ರೀನಿವಾಸ್, ಧೀರಜ್ ಮುನಿರಾಜು, ವಿಧಾನಪರಿಷತ್ ಸದಸ್ಯ ರವಿ ಮತ್ತಿತರರು ಉಪಸ್ಥಿತರಿದ್ದರು.

<><><>

ಅನಧಿಕೃತ ಬೀಜ ಮತ್ತು ರಸಗೊಬ್ಬರ ದಾಸ್ತಾನು ಹಾಗೂ ಮಾರಾಟ ನಿಯಂತ್ರಿಸಲು ಕೃಷಿ ಇಲಾಖೆ ಆಯುಕ್ತ ಡಾ.ಬಿ.ಸಿ.ಸತೀಶ್ ಅವರ ಸೂಚನೆ ಮೇರೆಗೆ ಅಧಿಕಾರಿಗಳ ತಂಡ ಹಾಸನ, ತುಮಕೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ ತೀವ್ರ ಕಾರ್ಯಾಚರಣೆ ನಡೆಸಿ ಲಕ್ಷಾಂತರ ರೂಪಾಯಿ ಮೌಲ್ಯದ ದಾಸ್ತಾನನ್ನು ವಶಪಡಿಸಕೊಂಡಿದೆ. ಹಾಸನ ಜಿಲ್ಲೆಯ ಸಾಲಗಾಮೆ ಮತ್ತು ಅರಸಿಕೆರೆ ವ್ಯಾಪ್ತಿಯಲ್ಲಿ ಬೀಜ ಕಾಯ್ದೆ ಉಲ್ಲಂಘಿಸಿ ಸಂಗ್ರಹಿಸಲಾಗಿದ್ದ ಒಟ್ಟು ೯೭ ಸಾವಿರ ರೂಪಾಯಿ ಮೌಲ್ಯದ ಹೈಬ್ರಿಡ್ ಮೆಕ್ಕೆಜೋಳ ಬೀಜಗಳು ಹಾಗೂ ಬೇಲೂರು ತಾಲೂಕಿನಲ್ಲಿ ೧.೭೭ ಲಕ್ಷ ರೂಪಾಯಿ ಮೌಲ್ಯದ ೮೮ ಚೀಲ ಯೂರಿಯಾ ಹಾಗೂ ಪಾಸ್ಫೊ ಜಿಪ್ಸಮ್ ಗ್ಯಾನ್ಯುಲ್ಸ್ ಜಪ್ತಿ ಮಾಡಲಾಗಿದೆ. ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕಿನಲ್ಲಿ ನಿಯಮ ಬಾಹಿರವಾಗಿ ಇರಿಸಲಾಗಿದ್ದ ೮೬ ಸಾವಿರ ರೂಪಾಯಿ ಮೌಲ್ಯದ ೨೨ ಲೀಟರ್ ಸೂಕ್ಷ್ಮ ಪೋಷಕಾಂಶ ಮಿಶ್ರಣವನ್ನು ವಶಪಡಿಸಿಕೊಳ್ಳಲಾಗಿದ್ದು, ಮಂಡ್ಯ ತಾಲೂಕಿನ ಇಂದುವಾಳದಲ್ಲಿ ಅನಧಿಕೃತವಾಗಿ ಸಾಗಿಸಲಾಗುತ್ತಿದ್ದ ೩೦೦ ಚೀಲ ಯೂರಿಯಾವನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ನಿಯಮ ಬಾಹಿರವಾಗಿ ಚಟುವಟಿಕೆ ನಡೆಸುವ ಮಾರಾಟಗಾರರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಎಚ್ಚರಿಸಿದೆ.

<><><>

ಚಾಮರಾಜನಗರ ಜಿಲ್ಲೆಯ ಬಿಳಿಗಿರಿ ರಂಗನ ಬೆಟ್ಟ ಸೇರಿದಂತೆ ಕಾಡಂಚಿನ ಪ್ರದೇಶದ ಬುಡಕಟ್ಟು ಸೋಲಿಗ ಸಮುದಾಯಕ್ಕೆ ನೀಡಲಾಗುತ್ತಿದ್ದ ಪೌಷ್ಠಿಕ ಆಹಾರ ಕಿಟ್‌ಗಳನ್ನು ಕಳೆದ ಮೂರು ತಿಂಗಳಿಂದ ಸ್ಥಗಿತಗೊಳಿಸಿರುವುದನ್ನು ವಿಧಾನ ಸಭೆ ವಿಪಕ್ಷ ನಾಯಕ ಆರ್.ಅಶೋಕ ಖಂಡಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಆಹಾರ ಭದ್ರತೆಯ ಭರವಸೆ ನೀಡಿ, ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಅತ್ಯಂತ ದುರ್ಬಲ ವರ್ಗಕ್ಕೆ ಅನ್ಯಾಯ ಮಾಡುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬರ ಮತ್ತು

ಉದ್ಯೋಗದ ಕೊರತೆ ನಡುವೆ ಸರ್ಕಾರದ ಈ ನಿರ್ಲಕ್ಷ್ಯದಿಂದಾಗಿ ಸೋಲಿಗ ಕುಟುಂಬಗಳು ಕೂಲಿ ಅರಸಿ ವಲಸೆ ಹೋಗುವಂತಾಗಿದೆ ಮತ್ತು ಮಕ್ಕಳು ಶಾಲೆ ತೊರೆಯುವ ದುಸ್ಥಿತಿ ನಿರ್ಮಾಣವಾಗಿದೆ. ಖಾತರಿ ಯೋಜನೆಗಳ ಹೆಸರಿನಲ್ಲಿ ಪ್ರಚಾರ ಪಡೆಯುತ್ತಿರುವ ಸರ್ಕಾರ ಮೂಲಭೂತ ಆಹಾರ ಒದಗಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ. ಇದೇ ವೇಳೆ ಬಾಕಿಯಿರುವ ಮೂರು ತಿಂಗಳ ಪೌಷ್ಠಿಕ ಆಹಾರ ಕಿಟ್‌ಗಳನ್ನು ತಕ್ಷಣವೇ ವಿತರಿಸಿ ಬುಡಕಟ್ಟು ಸಮುದಾಯಕ್ಕೆ ನ್ಯಾಯ ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

<><><>

ಮತದಾರರ ಪಟ್ಟಿಯಲ್ಲಿನ ಲೋಪದೋಷಗಳ ಕುರಿತು ತಾವು ನೀಡಿದ್ದ ಹೇಳಿಕೆಯನ್ನು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಸಮರ್ಥಿಸಿಕೊಂಡಿದ್ದಾರೆ. ಹಾಗೂ ಈ ಬಗ್ಗೆ ಮುಖ್ಯ ಚುನಾವಣಾ ಅಧಿಕಾರಿಯವರೇ ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ಸಚಿವ ಎಚ್.ಕೆ.ಪಾಟೀಲ್ ಅವರ ಹೆಸರಿನಲ್ಲಿ ಮೂರು ಮತಗಳಿರುವ ಕುರಿತು ಅಧಿಕೃತ ದಾಖಲೆಗಳ ಆಧಾರದ ಮೇಲೆಯೇ ತಾವು ಪ್ರಸ್ತಾಪಿಸಿದ್ದು, ಈ ವಿಷಯದಲ್ಲಿ ಕ್ಷಮೆ ಕೇಳುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಒಂದೇ ಕ್ಷೇತ್ರದಲ್ಲಿ ವ್ಯಕ್ತಿಯ ಹೆಸರು ಮತ್ತು ತಂದೆಯ ಹೆಸರು ಒಂದೇ ರೀತಿ ಇರುವುದರಿಂದ ಉಂಟಾಗಿರುವ ಗೊಂದಲದ ಬಗ್ಗೆ ಸಚಿವ ಎಚ್.ಕೆ.ಪಾಟೀಲ್ ನೀಡಿರುವ ಸ್ಪಷ್ಟೀಕರಣವನ್ನು ಚುನಾವಣಾ ಅಧಿಕಾರಿಗಳು ಕೂಲಂಕಷವಾಗಿ ಪರಿಶೀಲಿಸಬೇಕು ಎಂದು ಅವರು ತಿಳಿಸಿದ್ದಾರೆ. 'ಮ್ಯಾಪಿಂಗ್' ನಂತರವೂ ಒಂದೇ ಹೆಸರಿನಲ್ಲಿ ಹಲವು ಮತಗಳಿರುವ ಪ್ರಕರಣಗಳು ಮರುಕಳಿಸುತ್ತಿರುವುದು ಗಂಭೀರ ವಿಚಾರವಾಗಿದ್ದು, ತಾವು ಯಾರ ಮೇಲೂ ವೈಯಕ್ತಿಕ ಆಪಾದನೆ ಮಾಡದ ಕಾರಣ ಕ್ಷಮೆಗೆ ಒತ್ತಾಯಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ.

<><><>

ರಾಜ್ಯಾದ್ಯಂತ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಮುಂದುವರೆದಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ-೨೦೨೬ ಪ್ರಕ್ರಿಯೆ ಚುರುಕಿನಿಂದ ಸಾಗಿದೆ. ಜಿಲ್ಲೆಯಲ್ಲಿ ಇದುವರೆಗೂ ಒಟ್ಟು ೯ ಲಕ್ಷ ೫೯ ಸಾವಿರದ ೫೬೫ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದ್ದು, ೧೫ ಸಾವಿರದ ೯೩೭ ಫಾರ್ಮ್ ಗಳನ್ನು ಗಣಕೀಕರಣ ಗೊಳಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ. ಹಾವೇರಿ

ಜಿಲ್ಲೆಯಲ್ಲಿ ಜನರಿಂದಲೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಮನೆ ಮನೆಗೆ ಭೇಟಿ ನೀಡುತ್ತಿರುವ ಬಿಎಲ್‌ಒಗಳು ಪ್ರತಿಯೊಬ್ಬ ಮತದಾರರ ಮಾಹಿತಿ ದಾಖಲಿಸಿ ಕೊಳ್ಳುತ್ತಿದ್ದಾರೆ. ಸದ್ಯ ಪ್ರಾಥಮಿಕ ಮಾಹಿತಿ ಆಧರಿಸಿ, ೮೯೪ ಮಂದಿಯನ್ನು ಅನರ್ಹರ ಪಟ್ಟಿಗೆ ಸೇರಿಸಿದ್ದಾರೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆಯ ವಿಶೇಷ ಅಭಿಯಾನದಲ್ಲಿ ಪ್ರತಿಯೊಬ್ಬ ಪ್ರಜೆಯೂ ಜವಾಬ್ದಾರಿಯಿಂದ ಪಾಲ್ಗೊಳ್ಳಬೇಕು ಮತ್ತು ತಮ್ಮ ಅಮೂಲ್ಯವಾದ ಮತದಾನದ ಹಕ್ಕನ್ನು ರಕ್ಷಿಸಿಕೊಳ್ಳಬೇಕು ಎಂದು ಕೋಲಾರ ಸಂಸದ ಎಂ.ಮಲ್ಲೇಶ್ ಬಾಬು ಮನವಿ ಮಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಆರಂಭವಾಗಿರುವ ಎಸ್‌ಐಆರ್ ಪ್ರಕ್ರಿಯೆಯು ಅತ್ಯಂತ ಪ್ರಮುಖವಾದದ್ದಾಗಿದೆ. ಸಾರ್ವಜನಿಕರು ಇದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದರು.

**ಧ್ವನಿ : ಮಲ್ಲೇಶ್ ಬಾಬು (೨೧ ಸೆಕೆಂಡ್‌ಗಳು)**

<><><><>

ರಾಜ್ಯದ ಕೆಲವೆಡೆ ಕಳೆದ ಕೆಲವು ದಿನಗಳಿಂದ ಸ್ವಲ್ಪ ಮಟ್ಟದಲ್ಲಿ ಮಳೆಯಾಗಿದ್ದು, ಕೃಷಿ ಚಟುವಟಿಕೆಗಳು ಚುರುಕಾಗಿವೆ. ದಾವಣಗೆರೆ ಜಿಲ್ಲಾದ್ಯಂತ ಕಳೆದ ಕೆಲ ದಿನಗಳಿಂದ ಮಳೆಯಾಗುತ್ತಿದ್ದು, ಸ್ಥಗಿತಗೊಂಡಿದ್ದ ಕೃಷಿ ಚಟುವಟಿಕೆಗಳು ಮತ್ತೆ ಗರಿಗೆದರಿವೆ. ಮಳೆ ಕೊರತೆಯಿಂದಾಗಿ ಆತಂಕದಲ್ಲಿದ್ದ ಮತ್ತು ತಾತ್ಕಾಲಿಕವಾಗಿ ಕೃಷಿ ಕಾರ್ಯಗಳನ್ನು ಸ್ಥಗಿತಗೊಳಿಸಿದ್ದ ಅನ್ನದಾತರ ಮುಖದಲ್ಲಿ ಈಗ ಮಂದಹಾಸ ಮೂಡಿದೆ. ಜಿಲ್ಲೆಯ ಚನ್ನಗಿರಿ, ಹರಿಹರ, ಹೊನ್ನಾಳಿ, ಜಗಳೂರು ಸೇರಿದಂತೆ ವಿವಿಧ ತಾಲ್ಲೂಕುಗಳಲ್ಲಿ ಮಳೆಯಾಗಿದೆ. ಇದರಿಂದಾಗಿ ರೈತರು ಹೊಲಗಳತ್ತ ಮುಖ ಮಾಡಿದ್ದು, ಬಿತ್ತನೆ, ಉಳುಮೆ ಹಾಗೂ ಕಳೆ ಕೀಳುವ ಕಾರ್ಯಗಳಲ್ಲಿ ನಿರತರಾಗಿದ್ದಾರೆ. ಮೆಕ್ಕೆಜೋಳ, ಭತ್ತ, ರಾಗಿ ದ್ವಿದಳ ಧಾನ್ಯ ಬಿತ್ತನೆ ಪ್ರದೇಶ ವಿಸ್ತಾರಗೊಳ್ಳುತ್ತಿದೆ. ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಕಳೆದ ೪ ದಿನಗಳಿಂದ ಗಾಳಿ ಸಹಿತ ಸಾಧಾರಣ ಮಳೆಯಾಗುತ್ತಿದೆ. ಜಿಲ್ಲೆಯ ಮಲೆನಾಡು ಭಾಗದಲ್ಲಿ ಹೆಚ್ಚಿನ ಮಳೆಯಾಗಿದೆ. ಮಳೆಯಿಂದಾಗಿ ಮೂಡಿಗೆರೆ ತಾಲೂಕಿನ ಕೋಳೂರು ಗ್ರಾಮದಲ್ಲಿ ಮನೆಗಳ ಮೇಲೆ ಮರ ಉರುಳಿ ಬಿದ್ದು ಹೆಚ್ಚಿನ ಹಾನಿ ಸಂಭವಿಸಿದೆ. ಇದೇ ಗ್ರಾಮದ ಕೆಲ ಮನೆಗಳಿಗೆ ನೀರು ನುಗ್ಗಿದೆ. ಕೆಲವೆಡೆ ಮರ ಹಾಗೂ

ವಿದ್ಯುತ್ ಕಂಬಗಳು ಉರುಳಿವೆ. ಕಳಸ ತಾಲೂಕಿನ ಹಲವೆಡೆ ವಿದ್ಯುತ್ ಸಮಸ್ಯೆ ಉಂಟಾಗಿದೆ. ಕುರುರೆಮುಖ, ಶೃಂಗೇರಿ ಸುತ್ತ ಮುತ್ತ ಹೆಚ್ಚಿನ ಮಳೆಯಾಗುತ್ತಿದ್ದು ತುಂಗ-ಭದ್ರಾ ಹಾಗೂ ಹೇಮಾವತಿ ನದಿಗಳ ನೀರಿನ ಮಟ್ಟದಲ್ಲಿ ಏರಿಕೆ ಉಂಟಾಗಿದೆ. ಮಳೆಯಿಂದ ರೈತರಿಗೆ ಅನುಕೂಲವಾಗಿದ್ದು ಮಲೆನಾಡು ಭಾಗದಲ್ಲಿ ಕಾಫಿ, ಮೆಣಸು ಕೃಷಿ ಚಟುವಟಿಕೆಗಳು ಚುರುಕಾಗಿವೆ.

<><><>

ಮದ್ಯಪಾನ ಮತ್ತು ಮಾದಕವಸ್ತುಗಳ ವ್ಯಸನ ಕೇವಲ ವ್ಯಕ್ತಿಯ ಆರೋಗ್ಯವನ್ನಷ್ಟೇ ಅಲ್ಲ ಬದಲಿಗೆ ಕುಟುಂಬದ ನೆಮ್ಮದಿ, ಸಮಾಜದ ಶಾಂತಿ ಮತ್ತು ದೇಶದ ಭವಿಷ್ಯಕ್ಕೂ ಗಂಭೀರ ಸವಾಲಾಗಿ ಪರಿಣಮಿಸಿದೆ ಎಂದು ಕರ್ನಾಟಕ ರಾಜ್ಯ ಮದ್ಯಪಾನ ನಿಷೇಧ ಮತ್ತು ವ್ಯಸನಮುಕ್ತಿ ಮಂಡಳಿಯ ಅಧ್ಯಕ್ಷ ಶರಣಪ್ಪ ಸಲಾದಪುರ ಕಳವಳ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ವಿಶ್ವ ಮಾದಕವಸ್ತುಗಳ ವಿರೋಧಿ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲಾ ವರ್ಗದವರು ಸಾಮೂಹಿಕವಾಗಿ ಶ್ರಮಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ಡಾ.ವುಡೆ ಪಿ. ಕೃಷ್ಣ, ಯುವಜನರನ್ನು ಗುರಿಯಾಗಿಸಿ ನಡೆಯುತ್ತಿರುವ ಮಾದಕವಸ್ತುಗಳ ದುರುಪಯೋಗ ತಡೆಯಲು ವಿದ್ಯಾರ್ಥಿಗಳು ಜಾಗೃತ ರಾಯಭಾರಿಗಳಾಗಬೇಕು ಎಂದರು.

<><><>

ಗ್ರೇಟರ್ ಬೆಂಗಳೂರು ಆಡಳಿತ ವ್ಯವಸ್ಥೆಯಡಿ ಬೆಂಗಳೂರು ಪೂರ್ವ ನಗರ ಪಾಲಿಕೆಗೆ ಸ್ವತಂತ್ರ ಆಡಳಿತ ಲಭಿಸಿದ್ದು, ಪ್ರಸಕ್ತ ಸಾಲಿಗೆ ೩ ಸಾವಿರದ ೮೦೦ರಿಂದ ೩ ಸಾವಿರದ ೯೦೦ ಕೋಟಿ ರೂಪಾಯಿ ಮೊತ್ತದ ಆಯ-ವ್ಯಯ ರೂಪಿಸಲಾಗಿದೆ ಎಂದು ಪಾಲಿಕೆ ಆಯುಕ್ತ ಡಿ.ಎಸ್.ರಮೇಶ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸಂವಾದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಪಾರದರ್ಶಕತೆಗಾಗಿ ಕಾಮಗಾರಿಗಳ ಪ್ರಗತಿ ತಿಳಿಸುವ ಡಿಜಿಟಲ್ ಡ್ಯಾಶ್ ಬೋರ್ಡ್ ಜಾರಿಗೊಳಿಸಲಾಗುತ್ತಿದೆ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>